ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: 26

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

ದಿನಾಂಕ : DATE : 11/3/2021

# ಎಸ್ಐಟಿ ತನಿಖೆಗೆ ರಾಸಲೀಲೆ ಸಿಡಿ

## ಐಜಿಪಿ ಸೌಮೇಂದು ಮುಖರ್ಜಿ ನೇತೃತ್ವದಲ್ಲಿ ತನಿಖೆ

11/3/21

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಮಾಜಿ ಸಚಿವ ರಮೇಶ್ ಜಾರಕಿಹೊಳಿ ಅವರಿಗೆ ಸಂಬಂಧಿಸಿದ ಸಿಡಿ ಪ್ರಕರಣದ ತನಿಖೆ ನಡೆಸಲು ಸೌಮೇಂದು ಮುಖರ್ಜಿ ನೇತೃತ್ವದಲ್ಲಿ ಎಸ್ಐಟಿ ರಚನೆ ಮಾಡಿ ಸರಕಾರ ಅಧಿಕೃತ ಆದೇಶ ನೀಡಿದೆ.

ಸಿಎಂ ಜತೆಗೆ ಚರ್ಚೆ ನಡೆಸಿದ ಗೃಹ ಸಚಿವ ಬಸವರಾಜ ಬೊಮ್ಮಾಯಿ ಅವರು ಈ ನಿರ್ಧಾರವನ್ನು ಪ್ರಕಟಿಸಿದ್ದಾರೆ. ಇದಕ್ಕೂ ಮೊದಲು ಬೆಂಗಳೂರು ನಗರ ಪೊಲೀಸ್ ಆಯುಕ್ತರಿಂದ ವರದಿ ತರಿಸಿಕೊಂಡು ಪರಿಶೀಲನೆ ನಡೆಸಿದ ಗೃಹ ಸಚಿವರು, ಹಿರಿಯ ಅಧಿಕಾರಿಗಳ ಜತೆ ಚರ್ಚೆ ನಡೆಸಿದರು. ಈವರೆಗೂ ನಡೆಸಿದ ತನಿಖೆಯ ಸಾಧಕ ಬಾಧಕಗಳ ಬಗ್ಗೆ ವಿವರಣೆ ನೀಡಿದ ಅಧಿಕಾರಿಗಳು, ಎಸ್ಐಟಿ ತನಿಖೆಗೆ ವಹಿಸುವುದು ಸೂಕ್ತ ಎಂಬ ಅಭಿಪ್ರಾಯ ನೀಡಿದ ಹಿನ್ನೆಲೆಯಲ್ಲಿ ಎಸ್ಐಟಿ ತನಿಖೆಗೆ ವಹಿಸುವ ನಿರ್ಧಾರಕ್ಕೆ ಬರಲಾಗಿದೆ.

'ರಮೇಶ್ ಜಾರಕಿಹೊಳಿ ಅವರು ಗೃಹ ಸಚಿವರನ್ನು ಮಂಗಳವಾರ ಭೇಟಿಯಾಗಿ ಮನವಿ ಪತ್ರ ನೀಡಿದ್ದರು. ಅವರ ವಿರುದ್ಧ ಮಾರ್ಚ್ 2ರಂದು ದೂರು ನೀಡಿದ್ದು, ಅದರಲ್ಲಿ ರಾಜಕೀಯ ತೇಜೋವಧೆ ಹಾಗೂ ಮಾನಹಾನಿ ಮಾಡುವ ಉದ್ದೇಶವಿದೆ. ಇದಕ್ಕೆ ಸಂಬಂಧಿಸಿದಂತೆ ಹಲವಾರು ಜನ ಸೇರಿ ಷಡ್ಯಂತ್ರ ರೂಪಿಸಿರುವುದು ಸ್ಪಷ್ಟವಾಗಿರುತ್ತದೆ ಎಂದು ತಿಳಿಸಿದ್ದರು. ಈ ಹಿನ್ನೆಲೆಯಲ್ಲಿ ಷಡ್ಯಂತ್ರ ರೂಪಿಸಿರುವ ಹಾಗೂ ಇದರ ಹಿಂದಿರುವ ವ್ಯಕ್ತಿಗಳ ಬಗ್ಗೆ ಕೂಲಂಕಷ ವಿಚಾರಣೆ ನಡೆಸಲು ಎಸ್ಐಟಿ ರಚನೆ ಮಾಡಲು ತೀರ್ಮಾನಿಸಲಾಗಿದೆ. ಎಡಿಜಿಪಿ ಸೌಮೇಂದು ಮುಖರ್ಜಿ ಅವರಿಗೆ ತಂಡದ ನೇತೃತ್ವ ವಹಿಸಲಾಗಿದೆ' ಎಂದು ಸಚಿವ ಬಸವರಾಜ ಬೊಮ್ಮಾಯಿ ಹೇಳಿದರು.

### ಸೌಮೇಂದು ಮುಖರ್ಜಿ ಯಾರು?

ಎಸ್ಐಟಿ ತಂಡದ ನೇತೃತ್ವವನ್ನು ಕಾನೂನು ಮತ್ತು ಸುವ್ಯವಸ್ಥೆ ಹೆಚ್ಚುವರಿ ಪೊಲೀಸ್ ಆಯುಕ್ತ ಸೌಮೇಂದು ಮುಖರ್ಜಿ ಅವರು



ವಹಿಸಲಿದ್ದಾರೆ. ಮುಖರ್ಜಿ ಅವರು, ಬಿಹಾರ ಮೂಲದವರಾಗಿದ್ದು, ಎಂಎಸ್ಸಿ ಪದವೀಧರರಾಗಿದ್ದಾರೆ. ಬೆಂಗಳೂರು ನಗರದ ಪಶ್ಚಿಮ ವಿಭಾಗದ ಹೆಚ್ಚುವರಿ ಪೊಲೀಸ್ ಆಯುಕ್ತರಾಗಿ, ಮೈಸೂರು ದಕ್ಷಿಣ ವಲಯದ ಐಜಿಪಿಯಾಗಿಯೂ ಕಾರ್ಯನಿರ್ವಹಿಸಿದ್ದಾರೆ. ಪ್ರಸ್ತುತ ಆಂತರಿಕ ಭದ್ರತಾ ವಿಭಾಗದ ಐಜಿಪಿಯಾಗಿ ಸೇವೆ ಸಲ್ಲಿಸುತ್ತಿದ್ದಾರೆ.



ಟ್ಟಿಗುಂಡು



ರಮೇಶ್ ಜಾರಕಿಹೊಳಿ ಅವರ ಪತ್ರದ ಹಿನ್ನೆಲೆಯಲ್ಲಿ ಸಿಡಿ ಪ್ರಕರಣದ ಸಂಬಂಧ ತನಿಖೆಯನ್ನು ಎಸ್ಐಟಿಗೆ ವಹಿಸಿದ್ದೇವೆ. ಸಿಎಂ ಜತೆಗೆ ಚರ್ಚಿಸಿ ಹಿರಿಯ ಅಧಿಕಾರಿಗಳ ಸಲಹೆ ಮೇರೆಗೆ ಎಸ್ಐಟಿ ರಚಿಸಿದ್ದು, ಸೂಕ್ತ ತನಿಖೆ ನಡೆಯಲಿದೆ.

**- ಬಸವರಾಜ ಬೊಮ್ಮಾಯಿ**
ಗೃಹ ಸಚಿವ

### ಆರೋಪ-ಆಕ್ರೋಶ

- ಸಿಡಿ ಹಿಂದೆ 'ಕೈ'ವಾಡ: ಎಸ್‌ಟಿಎಸ್

'ಸಿಡಿ ಮಾಡಿಸಿದ್ದು ಕಾಂಗ್ರೆಸ್ ನಾಯಕರೇ' ಎಂದು ಸಚಿವ ಎಸ್.ಟಿ.ಸೋಮಶೇಖರ್ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿ, 'ನಾನು 20 ವರ್ಷ ಕಾಂಗ್ರೆಸ್‌ನಲ್ಲೇ ಇದ್ದೆ. ಅವರು ಏನೇನು ಮಾಡ್ತಾರೆ ಅಂತ ನನಗೆ ಗೊತ್ತಿದೆ. ಸಿಡಿ ಪ್ರಕರಣ ಸಿಬಿಐಗೆ ಕೊಡಲಿ, ಆಗ ಎಲ್ಲ ಹೊರಬರುತ್ತೆ. ರಾಜಕೀಯವಾಗಿ ಸವಾಲು ಹಾಕಲಿ ಎದುರುತ್ತೇವೆ. ತಾಕತ್ತಿದ್ರೆ ನನ್ನ ವಿರುದ್ಧ, ರಮೇಶ್ ಜಾರಕಿಹೊಳಿ ವಿರುದ್ಧ ಸ್ಪರ್ಧಿಸಲಿ. ಅದನ್ನು ಬಿಟ್ಟು ಸಿಡಿ ರಾಜಕಾರಣ ಮಾಡುವುದು ಸರಿಯಲ್ಲ. ಶಾಸಕರನ್ನು ಅವರು ಟಾರ್ಗೆಟ್ ಮಾಡಿಲ್ಲ, ಬಾಂಬೆ ಟೀಂನವರನ್ನು ಟಾರ್ಗೆಟ್ ಮಾಡುತ್ತಾರೆ ಎಂಬ ಖಚಿತ ಮಾಹಿತಿ ನಮಗಿತ್ತು. ಸಚಿವರನ್ನು ಟಾರ್ಗೆಟ್ ಮಾಡಿದ್ದಾರೆ, ಸಚಿವರಿಗೆ ಟಾರ್ಗೆಟ್ ಮಾಡಿದರೆ ರಾಜೀನಾಮೆ ಕೊಡಿಸಬಹುದು ಅನ್ನೋದು ಉದ್ದೇಶ ಎಂದರು.

- ಪ್ಯಾಂಟ್ ಬಿಚ್ಚಲು ಕಾಂಗ್ರೆಸ್‌ನೋರು ಹೇಳಿದ್ರಾ?

'ರಾಜಕಾರಣದಲ್ಲಿ ಷಡ್ಯಂತ್ರ ಸಹಜ. ಆದರೆ, ಅವರಿಗೆ ಶರ್ಟ್, ಪ್ಯಾಂಟ್ ಬಿಚ್ಚಲು ಯಾರಾದರೂ ಹೇಳಿಕೊಟ್ಟಿದ್ರಾ? ಅವರು ಆಡಿರುವ ಮಾತುಗಳಿಗೆ ಸ್ಕ್ರಿಪ್ಟ್ ಬರೆದು ಕೊಟ್ಟಿದ್ವಾ? ಸಿಎಂ ಬಿಎಸ್‌ವೈ ಭ್ರಷ್ಟ ಎಂದು ಹೇಳಲು ನಾವು ಹೇಳಿ ಕೊಟ್ಟಿದ್ವಾ?' ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

'ಬಿಜೆಪಿಯವರಗಿಂತ ಹತ್ತಿರವಾಗಿ ಎಸ್.ಟಿ.ಸೋಮಶೇಖರ್ ಅವರನ್ನು ನಾನು ನೋಡಿದ್ದೇನೆ. ಅವರು ನಮ್ಮ ನಾಯಕರಾಗಿದ್ದರು. 20 ವರ್ಷದಿಂದ ಸೋಮಶೇಖರ್ ಏನೇನು ಮಾಡಿದ್ದಾರ ಅದನ್ನು ಮೊದಲು ಹೇಳಲಿ. ಆಮೇಲೆ ನಮ್ಮ ಬಗ್ಗೆಯೂ ಹೇಳಲಿ' ಎಂದು ಸವಾಲು ಹಾಕಿದರು. ಮೊದಲು ನಾನು ಜಾರಕಿಹೊಳಿ ಸ್ನೇಹಿತರು. ಆದರೆ, ಅವರೇ ಹುಚ್ಚುಚ್ಚಾಗಿ ಮಾತನಾಡಿ ದೂರವಾದರು. ಸಿಡಿ ನಕಲಿಯಾದರೆ ತನಿಖೆ ಏಕೆ? ಎಂದು ಪ್ರಶ್ನಿಸಿದ್ದಾರೆ.